**ಅಸಲು ದಾವಾ ಸಂಖ್ಯೆ 65/2026ಪಿ. ಡಬ್ಲ್ಯೂ-1**

**ಸಾಕ್ಷಿಯು ದಿನಾಂಕ 04-06-2026 ರಂದು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ನೀಡಲಾಯಿತು.**

**<u>ಮುಖ್ಯ ವಿಚಾರಣೆಃ ಶ್ರೀ ಎಂ ಟಿ ಎಸ್ ವಾದಿಯ ಪರ ವಕೀಲರಿಂದ</u>**

ನಾನು ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿವೆ, ಅದರಲ್ಲಿರುವ ಅಂಶಗಳನ್ನು ಅರ್ಥೈಸಿಕೊಂಡ ನಂತರ ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

**2** ಕಂದಾಯ ಇಲಾಖೆಯವರು ನೀಡಿರುವ ದಿಃ **13.10.2025** ರ ವಂಶ ವೃಕ್ಷವನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ **ನಿಪಿ-1** ಎಂದು ಗುರುತಿಸಲಾಯಿತು. ಗಣಕೀಕೃತ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ, ಅದನ್ನು **ನಿಪಿ-2** ಎಂದು ಗುರುತಿಸಲಾಯಿತು. **2** ಗಣಕೀಕೃತ ಎಂ ಆರ್ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ, ಅದನ್ನು **ನಿಪಿ-3 ಮತ್ತು 4** ಎಂದು ಗುರುತಿಸಲಾಯಿತು.
ಮುಂದುವರದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ**

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ.ಚನ್ನಗಿರಿ.